**Akashvani : Bangalore**
**Regional Bulletin In Kannada**
**20.06.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಸಾರ್ವಜನಿಕರ ಕುಂದು-ಕೊರತೆಗಳನ್ನು ಆಲಿಸಲು ನೂತನ ಪ್ರಜಾಸೇವೆ ಇಲಾಖೆ ಆರಂಭಿಸಲು ಸಚಿವ ಸಂಪುಟ ನಿರ್ಧಾರ

೨. ನಾಳೆ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಅಂತಾರಾಷ್ಟ್ರೀಯ ಯೋಗ ದಿನ ಆಚರಣೆ - ಸಚಿವ ಯು.ಟಿ.ಖಾದರ್

೩. ಪಿಎಂ ಕಿಸಾನ್ ಸಮ್ಮಾನ್ ನಿಧಿ ಬಿಡುಗಡೆ ; ಬೆಂಗಳೂರಿನ ಕಾರ್ಯಕ್ರಮಗಳಲ್ಲಿ ಕೇಂದ್ರ ಸಚಿವರುಗಳು ಭಾಗಿ

೪. ಮೇಕೆದಾಟು ನಿರ್ಣಯ ; ತಮಿಳುನಾಡು ಸರ್ಕಾರಕ್ಕೆ ನೀಡಿದ ಬೆಂಬಲ ವಾಪಸ್ ಪಡೆಯಲು ಕಾಂಗ್ರೆಸ್‌ಗೆ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹ

<><*<><>*><>

ಸಾರ್ವಜನಿಕರ ಕುಂದುಕೊರತೆಗಳು ಹಾಗೂ ಅಹವಾಲುಗಳನ್ನು ಆಲಿಸಲು "ಪ್ರಜಾಸೇವೆ ಇಲಾಖೆ"ಯನ್ನು ಹೊಸದಾಗಿ ಪ್ರಾರಂಭಿಸಲಾಗುತ್ತಿದ್ದು, ಇದಕ್ಕೆ ಪ್ರತ್ಯೇಕ ಸಚಿವರು ಮತ್ತು ಹಿರಿಯ ಐಎಎಸ್ ಅಧಿಕಾರಿಯನ್ನು ನೇಮಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಇಂದು ನಡೆದ ಸಚಿವ ಸಂಪುಟ ಸಭೆಯ ನಂತರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಹಾಗೂ ಸಚಿವರಿಗೆ ಸಲ್ಲಿಕೆಯಾಗುವ ಮನವಿಗಳನ್ನು ಇದರ ವ್ಯಾಪ್ತಿಗೆ ತರಲಾಗುವುದು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ವಾರಕ್ಕೊಮ್ಮೆ ಸ್ಥಳೀಯ ಶಾಸಕರೊಂದಿಗೆ ಈ ಇಲಾಖೆಯ ಮೂಲಕ ಜನಸ್ಪಂದನ ಸಭೆಗಳನ್ನು ನಡೆಸಲಿದ್ದಾರೆ ಎಂದರು. ಇದರ ಜೊತೆಗೆ ೨೦೨೬ರ ಮೇ ೩೧ರೊಳಗೆ ಪೂರ್ಣಗೊಂಡಿರುವ ಕಟ್ಟಡಗಳಿಗೆ ಫೋಟೋ ಹಾಗೂ ಜಿಪಿಎಸ್ ದಾಖಲೆ ಸಲ್ಲಿಸಿ ವಿದ್ಯುತ್ ಸಂಪರ್ಕ ಪಡೆಯಲು ಆದೇಶ ಬಂದ ದಿನದಿಂದ ೧೫ ದಿನಗಳ ಕಾಲಾವಕಾಶ ನೀಡಲಾಗಿದೆ. ಇದು ಗ್ರಾಮೀಣ ಭಾಗದಲ್ಲಿನ ರೇಷ್ಮೆ ಸಾಕಾಣಿಕೆ ಮನೆ, ಕೊಟ್ಟಿಗೆಗಳಿಗೂ ಅನ್ವಯವಾಗಲಿದೆ. ಆರೋಗ್ಯ ಮತ್ತು ಸಾರಿಗೆ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಯಾದಗಿರಿಯಲ್ಲಿ ೧೦೦ ಕೋಟಿ ರೂಪಾಯಿ ವೆಚ್ಚದ ೨೦೦ ಹಾಸಿಗೆಗಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕಾರವಾರ ವೈದ್ಯಕೀಯ ಸಂಸ್ಥೆಯ ಸಿವಿಲ್ ಕಾಮಗಾರಿಗಳಿಗೆ ೧೮ ಕೋಟಿ ರೂಪಾಯಿ ಹಾಗೂ ಬೆಂಗಳೂರು ವೈದ್ಯಕೀಯ ಸಂಶೋಧನಾ ಆಸ್ಪತ್ರೆಯ ಉಪಕರಣಗಳಿಗೆ ೬೦ ಕೋಟಿ ರೂಪಾಯಿಗಳ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸಾರಿಗೆ ಇಲಾಖೆಗೆ ೨೩೫ ಕೋಟಿ ರೂಪಾಯಿ ವೆಚ್ಚದಲ್ಲಿ ೬೨೦ ನೂತನ ಬಸ್ ಖರೀದಿ, ೧೧ ಕಡೆ ಎಲೆಕ್ಟ್ರಿಕ್ ಬಸ್ ಡಿಪೋ ತೆರೆಯಲು ೧೧೨ ಕೋಟಿ ರೂಪಾಯಿ ಹಾಗೂ ಸಂಡೂರು ತಾಲೂಕು ಕೇಂದ್ರದ ಬಸ್ ನಿಲ್ದಾಣಕ್ಕೆ ೩೦ ಕೋಟಿ ರೂಪಾಯಿ ವೆಚ್ಚ ಮಾಡಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧವಾಗುವ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ನವದೆಹಲಿಯಲ್ಲಿ ೮೦ ಕೋಟಿ ರೂಪಾಯಿ ವೆಚ್ಚದಲ್ಲಿ 'ಕರ್ನಾಟಕ ಭವನ ೪' ನಿರ್ಮಿಸಲಾಗುತ್ತಿದ್ದು, ಇದರಲ್ಲಿ ಎಸ್‌ಸಿ, ಎಸ್‌ಟಿ ಮತ್ತು ಇತರ ಸಮುದಾಯದ ವಿದ್ಯಾರ್ಥಿಗಳಿಗೆ ಶೇಕಡ ೫೦:೫೦ ರಷ್ಟು ಅನುಪಾತದಲ್ಲಿ ಮೀಸಲಾತಿ ಇರಲಿದೆ. ಸುಪ್ರೀಂ ಕೋರ್ಟ್ ವ್ಯಾಜ್ಯಗಳ ಇತ್ಯರ್ಥಕ್ಕೆ ದೆಹಲಿಯ ಕಾನೂನು ವಿಭಾಗವನ್ನು ಸದೃಢಗೊಳಿಸಲಾಗುವುದು ಹಾಗೂ ಕೇಂದ್ರದ ಯೋಜನೆಗಳನ್ನು ರಾಜ್ಯಕ್ಕೆ ತರಲು ನಿವೃತ್ತರು ಸೇರಿದಂತೆ ಹಿರಿಯ ಅಧಿಕಾರಿಗಳ ಹೊಸ ತಂಡವನ್ನು ರಚಿಸಲಾಗುತ್ತಿದೆ. ಗದಗ-ಬೆಟಗೇರಿ ಪ್ರಾಧಿಕಾರದಿಂದ ಕಳಸಾಪೂರದಲ್ಲಿ ೧೯ ಕೋಟಿ ೬೯ ಲಕ್ಷ ರೂಪಾಯಿ ವೆಚ್ಚದ ವಸತಿ ಯೋಜನೆಗೆ ಮತ್ತು ದೇವನಹಳ್ಳಿಯ ಚನ್ನರಾಯಪಟ್ಟಣ ಹೋಬಳಿಯ ೧೩ ಗ್ರಾಮಗಳಲ್ಲಿ ಸ್ವಯಂಪ್ರೇರಿತವಾಗಿ ಜಮೀನು ನೀಡಲು ರೈತರಿಗೆ ಇದ್ದ ಕಾಲಾವಕಾಶವನ್ನು ೨೦೨೬ರ ಅಕ್ಟೋಬರ್ ೩೧ರವರೆಗೆ ವಿಸ್ತರಿಸಲು ಅನುಮತಿ ನೀಡಲಾಗಿದೆ.

<><*<><>*><>

'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಎಂಬ ಘೋಷವಾಕ್ಯದೊಂದಿಗೆ ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ನಾಳೆ ಬೆಳಗ್ಗೆ ೭.೦೦ ಗಂಟೆಗೆ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಆಚರಿಸಲಾಗುವುದು

ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ. ಬೆಂಗಳೂರಿನ ಆರೋಗ್ಯ ಸೌಧದಲ್ಲಿಂದು ನಡೆದ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಶಾಸಕರಾದ ಬಸವರಾಜ ಹೊರಟ್ಟಿ ಹಾಗೂ ರುದ್ರಪ್ಪ ಲಮಾಣಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದರು. ಶಾಸಕ ರಿಜ್ವಾನ್ ಅರ್ಷದ್ ಅಧ್ಯಕ್ಷತೆ ವಹಿಸಲಿರುವ ಈ ಕಾರ್ಯಕ್ರಮದಲ್ಲಿ ೪೦ ನಿಮಿಷಗಳ ಯೋಗಾಸನದ ಬಳಿಕ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ೨ ಸಾವಿರಕ್ಕೂ ಹೆಚ್ಚು ಸಾಧಕರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಹೇಳಿದರು. ಆಯುಷ್ ಇಲಾಖೆಯು ಇದರ ಅಂಗವಾಗಿ ಆಯೋಜಿಸಿದ್ದ ರಾಷ್ಟ್ರೀಯ ಯೋಗ ಸ್ಪರ್ಧೆಗಳಲ್ಲಿ ೧೬ ರಾಜ್ಯಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಇದರ ಮುಂದುವರಿದ ಭಾಗವಾಗಿ ಜುಲೈ ತಿಂಗಳಿನಲ್ಲಿ ಬೆಂಗಳೂರಿನ ಐಐಎಸ್‌ಸಿಯಲ್ಲಿ 'ವಿಜ್ಞಾನ ಯೋಗ', ಕಿದ್ವಾಯಿ ಆಸ್ಪತ್ರೆಯಲ್ಲಿ 'ಕಾರ್ಸಿನೋ ಯೋಗ' ಮತ್ತು ಮೈಸೂರಿನ ಜಯದೇವ ಸಂಸ್ಥೆಯಲ್ಲಿ 'ಕಾರ್ಡಿಯೋ ಯೋಗ' ರಾಷ್ಟ್ರೀಯ ವಿಚಾರಸಂಕಿರಣಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಯೋಗ ದಿನಾಚರಣೆ ಅಂಗವಾಗಿ ಸಾಮಾಜಿಕ ಜಾಲತಾಣಗಳ ಸ್ಪರ್ಧೆಗಳಲ್ಲಿ ೫೦ ಸಾವಿರಕ್ಕೂ ಹೆಚ್ಚು ಜನರು ಹಾಗೂ ಶಾಲೆಗಳ ವಿವಿಧ ಸ್ಪರ್ಧೆಗಳಲ್ಲಿ ೨೫ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದಾರೆ. ವರ್ಷದ ೩೬೫ ದಿನಗಳೂ ಯೋಗ ಶಿಬಿರ ನಡೆಸಲು 'ನಿತ್ಯ ಯೋಗ' ಕಾರ್ಯಕ್ರಮ ರೂಪಿಸಲಾಗಿದ್ದು, 'ಮೈಸೂರು ಯೋಗ ಹಬ್' ಯೋಜನೆಯನ್ನು ರಾಜ್ಯದ ಇತರ ಜಿಲ್ಲೆಗಳಿಗೂ ವಿಸ್ತರಿಸಲಾಗುವುದು ಎಂದು ತಿಳಿಸಿದರು. ನಾಳೆ ರಾಜ್ಯಾದ್ಯಂತ ನಡೆಯುವ ಕಾರ್ಯಕ್ರಮಗಳಲ್ಲಿ ಒಟ್ಟು ೧೦ ಲಕ್ಷ ಜನರು ಭಾಗವಹಿಸುವ ನಿರೀಕ್ಷೆಯಿದೆ ಎಂದು ಸಚಿವ ಯು.ಟಿ.ಖಾದರ್ ಮಾಹಿತಿ ನೀಡಿದ್ದಾರೆ.

<><*<><>*><>

ನಾಳೆ ನಡೆಯಲಿರುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಕೇಂದ್ರ ಸಂಸ್ಕೃತಿ ಸಚಿವಾಲಯ ಮತ್ತು ಭಾರತೀಯ ಪುರಾತತ್ವ ಸಮೀಕ್ಷೆ-ಎಎಸ್‌ಐ ದೇಶದ ಪ್ರಮುಖ ೧೦೦ ಐತಿಹಾಸಿಕ ಸ್ಥಳಗಳಲ್ಲಿ ವಿಶೇಷ ಯೋಗ ಪ್ರದರ್ಶನವನ್ನು ಹಮ್ಮಿಕೊಂಡಿದೆ. ಈ ಪಟ್ಟಿಯಲ್ಲಿ ರಾಜ್ಯದ ಐಹೊಳೆ, ಬಾದಾಮಿ, ವಿಜಯಪುರ, ಹಳೆಬೀಡು, ಹಂಪಿ, ಪಟ್ಟದಕಲ್ಲು, ಬೆಂಗಳೂರು ಮತ್ತು ಶ್ರೀರಂಗಪಟ್ಟಣ ಸೇರಿದಂತೆ ಒಟ್ಟು ೮ ಪ್ರಮುಖ ಐತಿಹಾಸಿಕ ಮತ್ತು ಸಾಂಸ್ಕೃತಿಕ ತಾಣಗಳು ಸ್ಥಾನ ಪಡೆದಿವೆ.

<><*<><>*><>

ಬೆಂಗಳೂರಿನ ಹೆಸರಘಟ್ಟ ಕೆರೆ ಅಂಚೆ ಬಳಿಯ ಐಸಿಎಆರ್ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ-ಐಎಎಚ್‌ಆರ್ ಆವರಣದಲ್ಲಿ ನಡೆದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಕಾರ್ಯಕ್ರಮದ ನೇರ ಪ್ರಸಾರ ಸಮಾರಂಭದಲ್ಲಿ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ವರ್ಷದಲ್ಲಿ ಮೂರು ಬಾರಿ ನಾಡಿನ ರೈತರಿಗೆ ೨ ಸಾವಿರ ರೂಪಾಯಿಗಳ ಕಂತನ್ನು ಬಿಡುಗಡೆ ಮಾಡಿ, ಅವರ ಕೃಷಿ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಲಾಗುತ್ತದೆ. ಈ ಯೋಜನೆಯಡಿ ಸುಮಾರು ೯ ಕೋಟಿ ರೈತರು ಫಲಾನುಭವಿಗಳಾಗಿದ್ದಾರೆ. ಈ ಬಾರಿಯ ಕಂತಿನಲ್ಲಿ ಸುಮಾರು ೧೮ ಸಾವಿರ ೮೦೦ ಕೋಟಿ ರೂಪಾಯಿಯ ೩ನೇ ಕಂತಿನ ಹಣವನ್ನು ಬಿಡುಗಡೆ ಮಾಡಲಾಗಿದೆ ಎಂದರು.

ಬೆಂಗಳೂರಿನ ಐಸಿಎಆರ್ ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲಗಳ ಸಂಸ್ಥೆಯ ಪಶು ಭವನದ ಬಳಿ ನಡೆದ ಪಿಎಂ ಕಿಸಾನ್ ಸಮ್ಮಾನ್ ನಿಧಿ ಕಾರ್ಯಕ್ರಮದಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಪಾಲ್ಗೊಂಡರು.

<><*<><>*><>

ಮೇಕೆದಾಟು ಯೋಜನೆ ಜಾರಿ ವಿರುದ್ಧವಾಗಿ ತಮಿಳುನಾಡಿನಲ್ಲಿ ತಮಿಳಗ ವೆಟ್ರಿ ಕಳಗಂ ಪಕ್ಷದ ಸರ್ಕಾರ ನಿರ್ಣಯ ಕೈಗೊಂಡಿದ್ದು, ಟಿವಿಕೆ ನೇತೃತ್ವದ ಸರ್ಕಾರಕ್ಕೆ ನೀಡಿರುವ ಬೆಂಬಲವನ್ನು ಕಾಂಗ್ರೆಸ್ ಹಿಂಪಡೆಯುವಂತೆ ಪಕ್ಷದ ಮೇಲೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಒತ್ತಡ ಹೇರಲಿ ಎಂದು ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಕೆದಾಟು ಯೋಜನೆ ದಕ್ಷಿಣ ಭಾರತದ ಹೃದಯಭಾಗ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಈ ಭಾಗಕ್ಕೆ ಘಾಸಿಯಾಗುವ ಕೆಲಸವನ್ನು ತಮಿಳುನಾಡು ಸರ್ಕಾರ ಮಾಡಿದೆ. ಯೋಜನೆಗೆ ತಾಂತ್ರಿಕ ಮತ್ತು ಪರಿಸರ ಅನುಮತಿ ಸೇರಿ ಯಾವುದೇ ಅನುಮೋದನೆ

ನೀಡದಂತೆ ಕೇಂದ್ರ ಸರ್ಕಾರವನ್ನ ಒತ್ತಾಯಿಸುವ ನಿರ್ಣಯವನ್ನು ತಮಿಳುನಾಡು ಸರ್ಕಾರ ಹಿಂಪಡೆಯದಿದ್ದರೆ ಅವರಿಗೆ ವಿಧಾನಸಭೆಗಯಲ್ಲಿ ನೀಡಿರುವ ಬೆಂಬಲವನ್ನು ಕಾಂಗ್ರೆಸ್ ಹಿಂಪಡೆದು ಅವರ ಮೇಲೆ ಒತ್ತಡ ತರಬೇಕು. ಈಗಾಗಲೇ ರಾಜ್ಯ ಸರ್ಕಾರ ಡಿಪಿಆರ್ ಸಿದ್ಧಗೊಳಿಸುತ್ತಿದ್ದು, ಯೋಜನೆ ಜಾರಿಗೆ ಒಗ್ಗಟ್ಟಿನಿಂದ ಇರಬೇಕು ಎಂದು ಅಭಿಪ್ರಾಯ ಪಟ್ಟರು.

<><*<><>*><>

ಜ್ಞಾನವನ್ನು ಸಾರ್ವತ್ರಿಕಗೊಳಿಸುವ ಮತ್ತು ಶಿಕ್ಷಣವನ್ನು ಸಮಾಜದ ಪ್ರತಿಯೊಂದು ವರ್ಗಕ್ಕೂ ತಲುಪಿಸುವಲ್ಲಿ ಮುಕ್ತ ಮತ್ತು ದೂರ ಶಿಕ್ಷಣ ವ್ಯವಸ್ಥೆ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ-ಕೆಎಸ್ಒಯು ಆಯೋಜಿಸಿದ್ದ "ಪ್ರವೇಶದಿಂದ ಶ್ರೇಷ್ಠತೆಯೆಡೆಗೆ: ದೂರ ಶಿಕ್ಷಣದ ಭವಿಷ್ಯದ ಹಾದಿಗಳು" ವಿಷಯದ ಶೈಕ್ಷಣಿಕ ಸಭೆ ಹಾಗೂ ಮಾಜಿ ಕುಲಪತಿ ಪ್ರೊ.ಎನ್.ಎಸ್. ರಾಮೇಗೌಡ ರಚಿಸಿರುವ "ಶಿಕ್ಷಣ: ಔಪಚಾರಿಕ, ಮುಕ್ತ ಮತ್ತು ದೂರಶಿಕ್ಷಣದ ಅವಲೋಕನ" ಕೃತಿ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.

<><*<><>*><>

ಬಿಡದಿ ಟೌನ್‌ಶಿಪ್‌ಗೆ ಭೂಮಿ ನೀಡಿದ ರೈತರಿಗೆ ಪರಿಹಾರದ ಚೆಕ್ ಅನ್ನು ಸಾಂಕೇತಿಕವಾಗಿ ೭ ಮಂದಿಗೆ ಶಾಸಕ ಎಚ್.ಸಿ.ಬಾಲಕೃಷ್ಣ ರಾಮನಗರದಲ್ಲಿಂದು ವಿತರಣೆ ಮಾಡಿದರು. ನಂತರ ಮಾತನಾಡಿದ ಅವರು, ಒಂದು ಎಕರೆಗೆ ೨ ಕೋಟಿ ೫೦ ಲಕ್ಷದ ೭ ಸಾವಿರ ರೂಪಾಯಿ ಪರಿಹಾರ ಹಣ ನೀಡಲಾಗುವುದು. ಜಮೀನಿನಲ್ಲಿ ಬೆಳೆದ ಬೆಳೆಗೂ ಪರಿಹಾರದ ಹಣ ನಿಗದಿಪಡಿಸಲಾಗಿದೆ ಎಂದು ಹೇಳಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**